ಸಿ. ಸಿ. ನಂ.- **1700/17**

ಪಿ. ಡಬ್ಲ್ಯೂ- **1**

ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಸಾಕ್ಷಿಯು ದಿನಾಂಕ- **23-09-2021** ರಂದು ಪುನಃ ವಿಚಾರಣೆಗಾಗಿ ಹಾಜರಾಗಿದ್ದು ಅವರಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ- ದೂರುದಾರರ ಪರ ಶ್ರೀ ಕೆ.ಸಿ. ವಕೀಲರಿಂದ -

ಸಾಕ್ಷಿಯು ನಿ.ಪಿ **1** ಚೆಕ್ ರಲ್ಲಿರುವ ಆರೋಪಿಯ ಸಹಿಯನ್ನು ನಿ.ಪಿ.- **1**-ಎ ಎಂದು, ಸಾಕ್ಷಿಯು ದಿಃ **11-09-2008** ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **8** ಎಂದು, ದಿನಾಂಕ- **11-09-2008** ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **9** ಎಂದು ಗುರುತಿಸಲಾಯಿತು. ನಿ.ಪಿ **8** ಮತ್ತು **9** ರ ಮೂಲ ಪ್ರತಿ ಖರೀದಿದಾರರ ಬಳಿ ಇರುತ್ತದೆ. ಸಾಕ್ಷಿಯು ತನ್ನ ಬ್ಯಾಂಕ್ ಖಾತೆಯ ಪಾಸ್ ಬುಕ್ ನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ **10** ಎಂದು ಗುರುತಿಸಲಾಯಿತು. ಸಾಕ್ಷಿಯು ದಿಃ **04-02-2008** ರ ಪಾಲುವಿಭಾಗ ಪತ್ರದ ನಕಲು ಪ್ರತಿಯನ್ನು ಹಾಜರುಪಡಿಸಿರುತ್ತಾರೆ. ಆದ್ದರಿಂದ ಆರೋಪಿತರ ವಿರುದ್ಧ ಸೂಕ್ತ ಕಾನೂನು ಕ್ರಮವನ್ನು ತೆಗೆದುಕೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ.

(ಆರೋಪಿ ಪರ ವಕೀಲರು ಪಾಟೀಸವಾಲಿಗಾಗಿ ಸಮಯಾವಕಾಶವನ್ನು ಕೇಳಿದ್ದು ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.)

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಲಯ
ಮತ್ತು ಪ್ರ. ದ. ನ್ಯಾ. ದಂ.ಗಳು, ಹೊಸಪೇಟೆ.